**National**
**Kannada**
**29.08.2026 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಬೆಂಗಳೂರು ಭೇಟಿ; ಮಾಜಿ ಮುಖ್ಯಮಂತ್ರಿ ದಿವಂಗತ ರಾಮಕೃಷ್ಣ ಹೆಗಡೆ ಅವರ ಜನ್ಮ ಶತಮಾನೋತ್ಸವದಲ್ಲಿ ಭಾಗಿ

೨. ಪ್ರಧಾನಿ ನರೇಂದ್ರ ಮೋದಿ ಅವರ ನಾಲ್ಕು ದಿನಗಳ ಮಧ್ಯ ಏಷ್ಯಾದ ಪ್ರವಾಸ; ಮೊದಲ ಚರಣದಲ್ಲಿ ಉಜ್ಬೇಕಿಸ್ತಾನ್‌ಗೆ ಭೇಟಿ

೩. ನಾಳೆ ಮನ್ ಕಿ ಬಾತ್‌ನ ೧೩೭ನೇ ಆವೃತ್ತಿ; ದೇಶವಾಸಿಗಳನ್ನುದ್ದೇಶಿಸಿ ಪ್ರಧಾನಿ ಮನದ ಮಾತು

೪. ಜಾಗತಿಕ ನಿಯಮಗಳ ನಿರೂಪಣೆಯಲ್ಲಿ ಭಾರತದ ಕೊಡುಗೆ ಮಹತ್ವದ್ದು - ರಕ್ಷಣಾ ಸಚಿವ ರಾಜನಾಥ್ ಸಿಂಗ್

೫. ಜಾಗತಿಕ ಪೂರೈಕೆ ಸರಪಳಿ ಮರುಹೊಂದಾಣಿಕೆಯಲ್ಲಿ ಭಾರತಕ್ಕೆ ಉತ್ತಮ ಅವಕಾಶ- ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್

**<><><*><><<>**

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಮಾಜಿ ಮುಖ್ಯಮಂತ್ರಿ ರಾಮಕೃಷ್ಣ ಹೆಗಡೆ ಅವರ ೧೦೦ನೇ ಜನ್ಮ ದಿನಾಚರಣೆಯನ್ನು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಉದ್ಘಾಟಿಸಿದರು. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು, ರಾಮಕೃಷ್ಣ ಹೆಗಡೆ ಅವರ ಕುರಿತ ಸಾಕ್ಷ್ಯಚಿತ್ರವನ್ನು ಬಿಡುಗಡೆಗೊಳಿಸಿದರು. ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಉಪರಾಷ್ಟ್ರಪತಿ ವೆಂಕಯ್ಯ ನಾಯ್ಡು, ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಹಲವಾರು ನಾಯಕರನ್ನು ಬೆಳೆಸಿದ ಕೀರ್ತಿ ರಾಮಕೃಷ್ಣ ಹೆಗಡೆಯವರಿಗೆ ಸಲ್ಲುತ್ತದೆ ಎಂದು ಹೇಳಿದರು. ಮಾಜಿ ಮುಖ್ಯಮಂತ್ರಿ

ಸಿದ್ದರಾಮಯ್ಯ ಮಾತನಾಡಿ, ರಾಮಕೃಷ್ಣ ಹೆಗಡೆಯವರೊಂದಿಗಿನ ಒಡನಾಟವನ್ನು ಮೆಲುಕು ಹಾಕಿ, ಹೆಗಡೆಯವರ ವಿಷಯಾಧಾರಿತ ರಾಜಕೀಯವನ್ನು ಅವರು ಶ್ಲಾಘಿಸಿದರು.

<>><><*><><<>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ನಾಳೆಯಿಂದ ಎರಡು ದಿನಗಳ ಕೇರಳಂ ಪ್ರವಾಸ ಕೈಗೊಳ್ಳಲಿದ್ದಾರೆ. ಅಲಪ್ಪುಳದಲ್ಲಿ ನಡೆಯಲಿರುವ ಪ್ರಮುಖ ಮಲಯಾಳಂ ದಿನಪತ್ರಿಕೆ ಕೇರಳ ಕೌಮುದಿಯ ೧೧೫ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಅವರು ಭಾಗವಹಿಸಲಿದ್ದಾರೆ. ನಂತರ ಪಟ್ಟನಂತಿಟ್ಟಕ್ಕೆ ತೆರಳಿ, ಕೇರಳದ ಅತ್ಯಂತ ಹಳೆಯ ಮತ್ತು ಪ್ರತಿಷ್ಠಿತ ದೋಣಿ ಸ್ಪರ್ಧೆಗಳಲ್ಲಿ ಒಂದಾದ ಆರಣ್ಮುಳ ಜಲೋತ್ಸವಕ್ಕೆ ಚಾಲನೆ ನೀಡಲಿದ್ದಾರೆ.

ಬಳಿಕ ತಿರುವನಂತಪುರದಲ್ಲಿ ರಾಜ್ಯ ಸರ್ಕಾರ ಆಯೋಜಿಸಿರುವ ಓಣಂ ಪ್ರವಾಸೋದ್ಯಮ ಸಪ್ತಾಹದ ಸಮಾರೋಪದ ಅಂಗವಾಗಿ ನಡೆಯುವ ಓಣಂ ಸಾಂಸ್ಕೃತಿಕ ಮೆರವಣಿಗೆಗೆ ಉಪರಾಷ್ಟ್ರಪತಿ ಚಾಲನೆ ನೀಡಲಿದ್ದಾರೆ. ಸೋಮವಾರ ಉಪರಾಷ್ಟ್ರಪತಿ ಲಕ್ಷದ್ವೀಪದ ಅಗತ್ತಿಗೆ ಭೇಟಿ ನೀಡಲಿದ್ದಾರೆ. ಲಕ್ಷದ್ವೀಪದಿಂದ ಕೇರಳಕ್ಕೆ ಮರಳಿದ ಬಳಿಕ, ಕೊಚ್ಚಿಯ ಕಕ್ಕನಾಡಿನ ರಾಜಗಿರಿ ಸ್ಕೂಲ್ ಆಫ್ ಎಂಜಿನಿಯರಿಂಗ್ ಮತ್ತು ಟೆಕ್ನಾಲಜಿಯ ಬೆಳ್ಳಿ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.?

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರ ನಾಲ್ಕು ದಿನಗಳ ಮಧ್ಯ ಏಷ್ಯಾದ ಪ್ರವಾಸ ಆರಂಭಿಸಿದ್ದು, ಮೊದಲ ಚರಣದಲ್ಲಿ ಉಜ್ಬೇಕಿಸ್ತಾನ್ ತಲುಪಿದ್ದಾರೆ. ಇಂದು ಸಂಜೆ ತಾಷ್ಕೆಂಟ್‌ನಲ್ಲಿ ಉಜ್ಬೇಕಿಸ್ತಾನ್ ಅಧ್ಯಕ್ಷ ಶವ್ಕತ್ ಮಿರ್ಜಿಯೋಯೆವ್ ಅವರು ಪ್ರಧಾನಿಯವರನ್ನು ಆತ್ಮೀಯವಾಗಿ ಬರಮಾಡಿಕೊಂಡರು.  ಉಭಯ ನಾಯಕರು ದ್ವಿಪಕ್ಷೀಯ ಮಹತ್ವದ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಸಲಿದ್ದಾರೆ. ಪ್ರಧಾನಿಯವರ ಉಜ್ಬೇಕಿಸ್ತಾನದ ನಾಲ್ಕನೇ ಭೇಟಿ ಇದಾಗಿದ್ದು, ತಾಷ್ಕೆಂಟ್ ನಗರವನ್ನು ಭಾರತೀಯ ಧ್ವಜಗಳು ಮತ್ತು ವಿವಿಧ ಫಲಕಗಳಿಂದ ಅಲಂಕರಿಸಲಾಗಿದೆ.ನಾಳೆ ಪ್ರಧಾನಿ ನರೇಂದ್ರ ಮೋದಿ ಮತ್ತು ಉಜ್ಬೇಕಿಸ್ತಾನ್ ಅಧ್ಯಕ್ಷ ಶವ್ಕತ್ ಮಿರ್ಜಿಯೋಯೆವ್ ಅವರು ಶತಮಾನಗಳಿಂದ ಬೆಳೆದು ಬಂದಿರುವ ನಾಗರಿಕತೆಯ ಸಂಬಂಧಗಳು ಹಾಗೂ ಜನರ ನಡುವಿನ ಬಾಂಧವ್ಯದ ಆಧಾರದ ಮೇಲೆ ರೂಪುಗೊಂಡಿರುವ ದ್ವಿಪಕ್ಷೀಯ ಸಂಬಂಧಗಳ ಸಮಗ್ರ ವಲಯವನ್ನು ಪರಿಶೀಲಿಸಲಿದ್ದಾರೆ. ಅಧ್ಯಕ್ಷೀಯ ಭವನದಲ್ಲಿ ನಡೆಯಲಿರುವ ಮಾತುಕತೆಯಲ್ಲಿ ಉಭಯ ನಾಯಕರು

ವ್ಯಾಪಾರ ಮತ್ತು ಹೂಡಿಕೆ, ರಕ್ಷಣೆ, ಡಿಜಿಟಲ್ ಸಂಪರ್ಕ, ಇಂಧನ, ಶಿಕ್ಷಣ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿನ ಸಹಕಾರವನ್ನು ಸಹ ಪರಿಶೀಲಿಸಲಿದ್ದಾರೆ.

<>><><*><><<>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಾಳೆ ಬೆಳಗ್ಗೆ ೧೧ ಗಂಟೆಗೆ ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ ಮನ್ ಕಿ ಬಾತ್‌ನಲ್ಲಿ ದೇಶ ಹಾಗೂ ವಿದೇಶಗಳ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ರೇಡಿಯೊ ಕಾರ್ಯಕ್ರಮದ ೧೩೬ನೇ ಆವೃತ್ತಿಯಾಗಿದೆ. ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳಲ್ಲಿ ಮತ್ತು ಎಐಆರ್ ನ್ಯೂಸ್ ವೆಬ್‌ಸೈಟ್ ಹಾಗೂ ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲೂ ಕಾರ್ಯಕ್ರಮ ನೇರಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

<>><><*><><<>

ನೇಪಾಳದಲ್ಲಿ ಸಂಭವಿಸಿದ ಭೀಕರ ಹಠಾತ್ ಪ್ರವಾಹದಿಂದ ನೂರಾರು ಮಂದಿ ಮೃತಪಟ್ಟಿದ್ದು, ವ್ಯಾಪಕ ಪ್ರಮಾಣದ ಹಾನಿಯಾಗಿದೆ. ಈ ಹಿನ್ನೆಲೆಯಲ್ಲಿ ಭಾರತದ ಸರ್ಕಾರ ನೀಡಿದ ನೆರವು ಹಾಗೂ ಕಾಳಜಿಗಾಗಿ ನೇಪಾಳದ ಅಧ್ಯಕ್ಷ ರಾಮಚಂದ್ರ ಪೌದೆಲ್ ಅವರು, ಭಾರತದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ. ಬುಧವಾರ ಸಂಭವಿಸಿದ ವಿನಾಶಕಾರಿ ಪ್ರವಾಹದ ಪರಿಣಾಮ ಅನೇಕ ಭಾರತೀಯರು ಪ್ರಾಣ ಕಳೆದುಕೊಂಡಿರುವ ಕುರಿತು ಪೌದೆಲ್ ಅವರು ಸಂತಾಪ ವ್ಯಕ್ತಪಡಿಸಿದ್ದಾರೆ. ಈ ಮಧ್ಯೆ ಹಠಾತ್ ಪ್ರವಾಹದಲ್ಲಿ ಮೃತಪಟ್ಟವರ ಸಂಖ್ಯೆ ೬೨೬ಕ್ಕೆ ಏರಿಕೆಯಾಗಿದ್ದು, ನೂರಾರು ಮಂದಿ ಇನ್ನೂ ನಾಪತ್ತೆಯಾಗಿದ್ದಾರೆ ಎಂದು ಸ್ಥಳೀಯ ಮಾಧ್ಯಮಗಳು ಅಧಿಕಾರಿಗಳನ್ನು ಉಲ್ಲೇಖಿಸಿ ವರದಿ ಮಾಡಿವೆ. ನೇಪಾಳದ ರಸುವಾ ಪ್ರದೇಶಕ್ಕೆ ಅಪ್ಪಳಿಸಿದ ಭಾರಿ ಪ್ರವಾಹವು ಚೀನಾದ ಟಿಬೆಟ್ ಪ್ರದೇಶದಲ್ಲಿ ಉಗಮಿಸಿದ್ದು, ಇದರಿಂದ ಅಂತಾರಾಷ್ಟ್ರೀಯ ಗಡಿಯ ಮೂಲಕ ಹರಿಯುವ ಭೋಟೆ ಕೋಶಿ ನದಿಯಲ್ಲಿ ಉಂಟಾದ ಪ್ರವಾಹವು ನೇಪಾಳದಲ್ಲಿ ಭಾರೀ ವಿನಾಶವನ್ನುಂಟು ಮಾಡಿದೆ.

<>><><*><><<>

ಭೀಕರ ಪ್ರವಾಹದ ಹಿನ್ನೆಲೆಯಲ್ಲಿ ಭಾರತ ನೀಡುತ್ತಿರುವ ನೆರವಿಗೆ ನೇಪಾಳ ಪ್ರಶಂಸೆ ವ್ಯಕ್ತಪಡಿಸಿದ್ದು, ಪ್ರಧಾನಿ ನರೇಂದ್ರ ಮೋದಿ ತುಂಬಾ ಉದಾರವಾಗಿ ಸಹಾಯ ಮಾಡುತ್ತಿದ್ದಾರೆ ಎಂದು ನೇಪಾಳ ಹೇಳಿದೆ. ಪ್ರವಾಹದ ಬಳಿಕ ದೆಹಲಿಯಿಂದ ವಿಶೇಷ ಪರಿಹಾರ ಸಾಮಗ್ರಿಗಳನ್ನು ವಿಮಾನದ ಮೂಲಕ ನೇಪಾಳಕ್ಕೆ ಕಳುಹಿಸಲಾಗಿದೆ. ಪುನರ್‌ನಿರ್ಮಾಣ ಕಾರ್ಯಗಳಿಗಾಗಿ ಅಗತ್ಯ ನೆರವು ನೀಡುವುದಾಗಿ ಭಾರತ ಹೇಳಿದೆ ಎಂದು ನೇಪಾಳದ ಹಣಕಾಸು ಸಚಿವ ಸ್ವರ್ಣಿಮ್ ವಾಗ್ಲೆ ಹೇಳಿದ್ದಾರೆ. ಬುಧವಾರದಿಂದ ಈವರೆಗೆ ಭಾರತ, ಪ್ರವಾಹ ಪೀಡಿತ ನೇಪಾಳದ ಪ್ರದೇಶಗಳಿಗೆ ೫೭.೬ ಟನ್ ಪರಿಹಾರ ಸಾಮಗ್ರಿಗಳನ್ನು ರವಾನಿಸಿದೆ. ನೇಪಾಳದ ಮನವಿಯ ಮೇರೆಗೆ ವೈದ್ಯಕೀಯ ಸಿಬ್ಬಂದಿ ಮತ್ತು ಸುರಂಗ ರಕ್ಷಣಾ ತಜ್ಞರನ್ನು ಒಳಗೊಂಡ ೧೧ ಸದಸ್ಯರ ಭಾರತೀಯ ತಂಡ ಸಹ ಸ್ಥಳೀಯ ಅಧಿಕಾರಿಗಳಿಗೆ ನೆರವು ನೀಡಲು ನೇಪಾಳಕ್ಕೆ ತೆರಳಿದೆ.

<>><><*><><<>

ಭಾರತವು ಕೇವಲ ಪ್ರಮುಖ ಆರ್ಥಿಕ ಶಕ್ತಿಯಾಗಿ ಮಾತ್ರವಲ್ಲದೆ, ತನ್ನ ನಾಗರಿಕತೆಯ ಪರಂಪರೆ, ಸಂಸ್ಕೃತಿ ಮತ್ತು ಸಾಮರ್ಥ್ಯದ ಬಗ್ಗೆ ಆತ್ಮವಿಶ್ವಾಸ ಹೊಂದಿರುವ ರಾಷ್ಟ್ರವಾಗಿ ಹೊರಹೊಮ್ಮಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಲಖನೌನ ಬಾಬಾಸಾಹೇಬ್ ಭೀಮರಾವ್ ಅಂಬೇಡ್ಕರ್ ವಿಶ್ವವಿದ್ಯಾಲಯದ ೧೧ನೇ ಘಟಿಕೋತ್ಸವ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ನವ ಭಾರತದ ಅತಿದೊಡ್ಡ ಪರಿವರ್ತನೆಯೆಂದರೆ, ಭಾರತವು ಇನ್ನು ಮುಂದೆ ಜಾಗತಿಕ ನಿಯಮಗಳನ್ನು ಕೇವಲ ಅನುಸರಿಸುವ ರಾಷ್ಟ್ರವಾಗಿಲ್ಲ. ಬದಲಾಗಿ, ನಿಯಮಗಳ ರೂಪಿಸುವಿಕೆಯಲ್ಲೂ ಕೊಡುಗೆ ನೀಡುತ್ತಿದೆ ಎಂದು ಹೇಳಿದರು. ಭಾಷೆ, ಸಂಸ್ಕೃತಿ ಮತ್ತು ನಾಗರಿಕತೆಯ ಬಗ್ಗೆ ರಾಷ್ಟ್ರೀಯ ಹೆಮ್ಮೆ ಹೊಂದುವುದು ದೇಶದ ಸ್ವಾವಲಂಬನೆ ಮತ್ತು ಪ್ರಗತಿಯನ್ನು ಹೆಚ್ಚಿಸುತ್ತದೆ. ಭಾರತ, ಸದ್ಯ ಉತ್ತಮ ಸ್ಥಾನದಲ್ಲಿದ್ದು, ಆರ್ಥಿಕವಾಗಿ, ಮಾನಸಿಕವಾಗಿ ಮತ್ತು ಸಾಂಸ್ಕೃತಿಕವಾಗಿ ಎಲ್ಲ ರೀತಿಯಲ್ಲೂ ದೇಶವನ್ನು ಮತ್ತಷ್ಟು ಬಲಪಡಿಸುವತ್ತ ಸರ್ಕಾರ ಗಮನಹರಿಸಿದೆ ಎಂದು ಹೇಳಿದರು. ನ್ಯಾಯ, ಸಮಾನತೆ, ಸ್ವಾತಂತ್ರ್ಯ ಮತ್ತು ಸಹೋದರತ್ವದ ಆದರ್ಶಗಳಿಗೆ ಬದ್ಧರಾಗಿರುವ, ರಾಷ್ಟ್ರ ನಿರ್ಮಾಣದ ಬಗ್ಗೆ ಉತ್ಸಾಹ ಹೊಂದಿರುವ ಯುವಜನರನ್ನು ಶಿಕ್ಷಣ ಸಂಸ್ಥೆಗಳು ರೂಪಿಸಬೇಕು ಎಂದು ರಾಜನಾಥ್ ಸಿಂಗ್ ಕರೆ ನೀಡಿದರು.

<>><><*><><<>

ಜಾಗತಿಕ ಕಂಪನಿಗಳು ತಮ್ಮ ಪೂರೈಕೆ ಸರಪಳಿ ಮತ್ತು ಬಂಡವಾಳ ಹಂಚಿಕೆ ವ್ಯವಸ್ಥೆಗಳನ್ನು ಮರುಪರಿಶೀಲಿಸುತ್ತಿರುವ ಸಮಯದಲ್ಲಿ ಭಾರತ, ವಿಶಾಲ ಮಾರುಕಟ್ಟೆಯ ಪ್ರಮಾಣದ ಜೊತೆಗೆ ದೀರ್ಘಾವಧಿಯ ಹೂಡಿಕೆ ಮತ್ತು ಉದ್ಯಮ ಕಾರ್ಯಾಚರಣೆಗಳಿಗೆ ಅಗತ್ಯವಾದ ಸಾಮರ್ಥ್ಯವನ್ನೂ ಹೊಂದಿದೆ ಎಂದು ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಅಮೆರಿಕದ ಷಿಕಾಗೋದಲ್ಲಿ ಪ್ರಮುಖ ಹೂಡಿಕೆದಾರರು ಮತ್ತು ಉದ್ಯಮ ಕ್ಷೇತ್ರದ ನಾಯಕರೊಂದಿಗೆ ನಡೆದ ಉನ್ನತ ಮಟ್ಟದ ವ್ಯವಹಾರ ಸಮಾಲೋಚನಾ ಸಭೆಯಲ್ಲಿ ಮಾತನಾಡಿದ ಅವರು, ಭಾರತದ ವ್ಯಾಪಕ ಆರ್ಥಿಕ ಬೆಳವಣಿಗೆ, ಸುಧಾರಣಾ ವೇಗ ಹಾಗೂ ದೀರ್ಘಾವಧಿಯ ಹೂಡಿಕೆಗೆ ವಿಸ್ತರಿಸುತ್ತಿರುವ ಅವಕಾಶಗಳನ್ನು ವಿವರಿಸಿದರು. ಭಾರತದ ಹೂಡಿಕೆ ಆಕರ್ಷಣೆಯು ಬೃಹತ್ ಮಾರುಕಟ್ಟೆ, ನಿರಂತರ ಆರ್ಥಿಕ ಬೆಳವಣಿಗೆ, ಕೌಶಲ್ಯ ಹೊಂದಿದ ಪ್ರತಿಭೆ, ವಿಶ್ವದರ್ಜೆಯ ಮೂಲಸೌಕರ್ಯ, ತಾಂತ್ರಿಕ ಪ್ರಗತಿ ಹಾಗೂ ಕಳೆದ ಒಂದು ದಶಕದ ಸತತ ಸುಧಾರಣೆಗಳ ಸಮನ್ವಯದಲ್ಲಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು. ಆಧಾರ್, ಯುಪಿಐ, ಡಿಜಿಲಾಕರ್, ಒಎನ್‌ಡಿಸಿ ಮತ್ತು ಇಂಡಿಯಾ ಸ್ಟ್ಯಾಕ್ ಸೇರಿದಂತೆ ಭಾರತದ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯವು ಜನಸಂಖ್ಯೆಯ ಬೃಹತ್ ಪ್ರಮಾಣದಲ್ಲಿ ಕಾರ್ಯನಿರ್ವಹಿಸುವ ವೇದಿಕೆಗಳನ್ನು ಸೃಷ್ಟಿಸಿದೆ ಎಂದು ಹೇಳಿದರು. ಜಾಗತಿಕ ಪೂರೈಕೆ ಸರಪಳಿಗಳ ಮರುಹೊಂದಾಣಿಕೆಯನ್ನು ಉಲ್ಲೇಖಿಸಿದ ಅವರು, ಭಾರತವು ಬೃಹತ್ ದೇಶೀಯ ಮಾರುಕಟ್ಟೆಯೊಂದಿಗೆ ಜಾಗತಿಕ ಮಟ್ಟದಲ್ಲಿ ಸ್ಪರ್ಧಾತ್ಮಕ ಉತ್ಪಾದನಾ ಸಾಮರ್ಥ್ಯವನ್ನು ಹೊಂದಿದೆ. ಉತ್ಪಾದನಾ ಸಂಪರ್ಕಿತ ಪ್ರೋತ್ಸಾಹಧನ ಯೋಜನೆಗಳ ಬೆಂಬಲದೊಂದಿಗೆ ಗಮನವು ಕೇವಲ ಜೋಡಣೆ ಕಾರ್ಯದಿಂದ ಹಿಡಿದು ಘಟಕಗಳ ಆಳವಾದ ಉತ್ಪಾದನೆ, ಎಂಜಿನಿಯರಿಂಗ್ ಮತ್ತು ಸುಧಾರಿತ ತಂತ್ರಜ್ಞಾನಗಳತ್ತ ಬದಲಾಗುತ್ತಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದರು.

<><><*><><>

ಜವಳಿ ಸಂಶೋಧನಾ ಸಂಘಗಳ ಸಮನ್ವಯ ಸಮಿತಿಯ ೨ನೇ ಸಭೆ ಇಂದು ನವದೆಹಲಿಯಲ್ಲಿ ನಡೆಯಿತು. ಜವಳಿ ಸಚಿವಾಲಯದ ಕಾರ್ಯದರ್ಶಿ ನೀಲಂ ಶಾಮಿ ರಾವ್ ಅವರು ಸಭೆಯ ಅಧ್ಯಕ್ಷತೆ ವಹಿಸಿದ್ದರು. ಜವಳಿ ಸಂಶೋಧನಾ ವ್ಯವಸ್ಥೆಗೆ ಸಂಬಂಧಿಸಿದ ಪ್ರಮುಖ ವಿಷಯಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಜವಳಿ ಸಂಶೋಧನಾ ಸಂಘಗಳ ನಡುವೆ ಸಮನ್ವಯವನ್ನು ಮತ್ತಷ್ಟು ಬಲಪಡಿಸುವ ಬಗ್ಗೆಯೂ ಸಭೆಯಲ್ಲಿ ಸಮಾಲೋಚನೆ ನಡೆಸಲಾಯಿತು ಎಂದು ಸಚಿವಾಲಯ ತಿಳಿಸಿದೆ. ಸಮನ್ವಯ ಸಮಿತಿಯ ಸದಸ್ಯರು ಹಾಗೂ ಜವಳಿ ಸಂಶೋಧನಾ ಸಂಘಗಳ ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಿದ್ದರು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**